1944 (2283) ಶ್ರೀ ಮೇಟಿ ಹುಲ್ಲಪ್ಪ ಯಮನಪ್ಪ (ಗುಳೇದಗುಡ್ಡ) :– ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಳೇದಗುಡ್ಡ ಬಸ್ ಡಿಪೋ ಕಾಮಗಾರಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಯಾವ ಕಾರಣಕ್ಕಾಗಿ ಬಸ್ ಡಿಪೋ ಕಾಮಗಾರಿ ವಿಳಂಬವಾಗಿರುತ್ತದೆ;

ಇ) ಇದನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಎನ್. ಚಲುವರಾಯಸ್ವಾಮಿ (ಸಾರಿಗೆ ಸಚಿವರು) :

ಅ) ಬಂದಿದೆ.

ಆ) ಸಂಸ್ಥೆಯ ಆರ್ಥಿಕ ಮುಗ್ಗಟ್ಟಿನಿಂದ ಬಸ್ ಡಿಪೋ ಕಾಮಗಾರಿಯ ಪ್ರಗತಿಯು ವಿಳಂಬವಾಗಿರುತ್ತದೆ.

ಇ) ಪ್ರಸ್ತುತ ಕಾಮಗಾರಿಯು ಅಂತಿಮ ಹಂತದಲ್ಲಿದ್ದು, ಅದನ್ನು ಶೀಘ್ರದಲ್ಲಿಯೇ ಪೂರ್ಣಗೊಳಿಸಲಾಗುವುದು.

1945 (2284) ಶ್ರೀ ಮೇಟಿ ಹುಲ್ಲಪ್ಪ ಯಮನಪ್ಪ (ಗುಳೇದಗುಡ್ಡ) :– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಳೇದಗುಡ್ಡ ಪಟ್ಟಣ ಮತ್ತು ಸುತ್ತ ಮುತ್ತಲಿನ ಹಳ್ಳಿಗಳಿಗೆ ಆಲಮಟ್ಟಿ ಕೃಷ್ಣ ನದಿ ಹಿನ್ನೀರಿನಿಂದ ಶಾಶ್ವತ ಕುಡಿಯುವ ನೀರಿನ ಯೋಜನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಯಾವ ಕ್ರಮಕೈಗೊಂಡಿದೆ ಮತ್ತು ಅದು ಈಗ ಯಾವ ಹಂತದಲ್ಲಿದೆ;

ಇ) ಈ ಯೋಜನೆಯನ್ನು ಕೂಡಲೇ ಕೈಗೆತ್ತಿಕೊಳ್ಳಲು ಇರುವ ತೊಂದರೆ ಏನು?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.